92

ನಂದೀದುರ್ಗದ ಡಿವಿಜ್ಞ ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ರ 1895—96ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 266.

ವೃತಪಟ್ಟ ಮಾಲೂರು ನರಸಮ್ಮನವರ ಮಗ ರಂಗಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜಿದಾರು, ಬೆಂಗಳೂರು ಬಳಿಪ್ಯಾಟೆಯಲ್ಲಿ ಯಿರುವ ವೆಂಕಟರಮಣಪ್ಪನ ಮಗಳು ಲಕ್ಷ್ಮಿದೇವಮ್ಮ ಮೈನರು ಗಾರ್ಡಿಯರ್ ಮತ್ತು ತಂದೆ ವೆಂಕಟರಮಣಪ್ಪನು ವೃತಪಟ್ಟ ಸದರೀ ರಂಗಯ್ಯನವರಿಗೆ ಮೈನರು ಲಕ್ಷ್ಮಿದೇವಮ್ಮನು ಹೆಂಡತಿ ಆಗಬೇಕೆಂಬ ಹಕ್ಕು ದಾರಿ ಮೇಲೆ ಬೆಂಗಳೂರು ಬಳಿಪ್ಯಾಟೆ ಸ್ಥಳದ ಲಕ್ಷ್ಮಿದೇವಮ್ಮ ಮೈನರು ಗಾರ್ಡಿಯರ್ ಮತ್ತು ತಂದೆ ವೆಂಕಟರಮಣಪ್ಪನು ಮಾಲೂರು ವಾಸಸ್ಥರಾಗಿ ವೃತಪಟ್ಟ ರಂಗಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ರ 1860ನೇ ಇಸವಿ 27ನೇ ಆಕ್ಟ್ಯ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಲಕ್ಷ್ಮಿದೇವಮ್ಮ ಮೈನರು ಗಾರ್ಡಿಯರ್ ಮತ್ತು ತಂದೆ ವೆಂಕಟರಮಣಪ್ಪನ ಅರ್ಜಿಯನ್ನು ಸ್ರ 1896ನೇ ಇಸವಿ ಫಿಬ್ರವರಿ ತಿಂಗಳ ತಾರೀಖು 17ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವೃತಪಟ್ಟ ರಂಗಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ರ 1896ನೇ ಇಸವಿ ಜನವರಿ ತಿಂಗಳ 22ನೇ ತಾರೀಖಿನಲ್ಲಿ ಕೋರ್ಟ್ ಮೊಹರ್ ನಿಶಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸ್ರ 1895—96ನೇ ಇಸವಿ ಅರ್ಜೀ ನಂಬರ್ 267.

ವೃತಪಟ್ಟ ಭಾವಿಕಿದ್ದಂಣನ ಆಸ್ತೀ ವಿಷಯದಲ್ಲಿ—

ಅರ್ಜೀದಾರು, ತುಮಕೂರು ಡಿಸ್ಟ್ರಿಕ್ಟು ಶಿರಾ ತಾಲ್ಲೂಕು, ಕಸಬಾ ಶಿರಾದಲ್ಲಿರುವ ಭಾವಿಕಿದ್ದಂಣನ ಮಗ ಭಾವಿಭಾವಮಂಣ, ವೃತಪಟ್ಟ ಸದರೀ ಭಾವಿಕಿದ್ದಂಣನಿಗೆ ಮಗ ಆಗಬೇಕೆಂಬ ಹಕ್ಕುದಾರಿಮೇಲೆ ಶಿರಾ ಸ್ಥಳದ ಭಾವಿಭಾವಮಂಣನು, ಶಿರಾ ವಾಸಸ್ಥನಾಗಿ ವೃತಪಟ್ಟ ಕಿದ್ದಂಣನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ರ 1860ನೇ ಇಸವಿ 27ನೇ ಆಕ್ಟ್ಯ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಭಾವಮಂಣನ ಅರ್ಜಿಯನ್ನು ಸ್ರ 1896ನೇ ಇಸವಿ ಫಿಬ್ರವರಿ ತಿಂಗಳ ತಾರೀಖು 22ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವೃತಪಟ್ಟ ಭಾವಿಕಿದ್ದಂಣನ ಆಸ್ತಿಗೆ ಹಕ್ಕುದಾರರಾದ ವಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ರ 1895—96ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 269.

ವೃತಪಟ್ಟ ಲಕ್ಷ್ಮಣ್ಣನ ಹೆಂಡತಿ ನಂಜಮ್ಮನ ಆಸ್ತೀ ವಿಷಯದಲ್ಲಿ—

ಅರ್ಜೀದಾರು, ಬೆಂಗಳೂರು ತಾಲ್ಲೂಕು ಸರಾಫ್ ಚನ್ನಪ್ಪ ವೃತಪಟ್ಟ ಸದರೀ ನಂಜಮ್ಮನಿಗೆ ಅಂಣ ಆಗಬೇಕೆಂಬ ಹಕ್ಕುದಾರಿಮೇಲೆ ಬೆಂಗಳೂರು ಸ್ಥಳದ ಸರಾಫ್ ಚನ್ನಪ್ಪ ಬೆಂಗಳೂರು ವಾಸಸ್ಥರಾಗಿ ವೃತಪಟ್ಟ ನಂಜಮ್ಮನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ರ 1860ನೇ ಇಸವಿ 27ನೇ ಆಕ್ಟ್ಯ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಚನ್ನಪ್ಪನ ಅರ್ಜಿಯನ್ನು ಸ್ರ 1896ನೇ ಇಸವಿ ಫಿಬ್ರವರಿ ತಿಂಗಳ ತಾರೀಖು 26ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವೃತಪಟ್ಟ ನಂಜಮ್ಮನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ರ 1896ನೇ ಇಸವಿ ಫಿಬ್ರವರಿ ತಿಂಗಳ 8ನೇ ತಾರೀಖಿನಲ್ಲಿ ಕೋರ್ಟ್ ಮೊಹರ್ ನಿಶಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸ್ರ 1895-96ನೇ ಇಸವಿ ಮಿಸಲೇನಿಯಸ್ ಅರ್ಜಿ ನಂಬರ್ 276.

ಅರ್ಜಿದಾರ ದೇವಂಡಹಳ್ಳಿ ಕಸಬಾದುಲ್ಲಿರುವ ಭೂತೀ ದೊಡ್ಡ ಚನ್ನಪ್ಪನ ದತ್ತು ಮಗ ಕೆಂಪಕಟ್ಟಯ್ಯ, ಭೂತೀ ಇಲತೊರೆ ದೊಡ್ಡ ಚನ್ನಪ್ಪನ 2ನೇ ಹೆಂಡತಿಯ ಮೈನರ್ ಮಕ್ಕಳಾದ ದೇವಂಡಹಳ್ಳಿ ಸ್ಥಳದ ದೊಡ್ಡ ಚನ್ನಿವೀರಮ್ಮ ಮತ್ತು ಚಿಕ್ಕ ಚನ್ನಿವೀರಮ್ಮ ಇವರುಗಳ ಆಸ್ತಿ ವಿಷಯದಲ್ಲಿ—

ಸದರೀ ಮೈನರಾದ ದೊಡ್ಡ ಚನ್ನವೀರಮ್ಮ ಮತ್ತು ಚಿಕ್ಕ ಚನ್ನವೀರಮ್ಮನಿಗೆ ಅಂಣನು ಆಗಬೇಕೆಂಬ ಹಕ್ಕಿನಮೇಲೆ ದೇವಂಡಹಳ್ಳಿ ಸ್ಥಳದ ಕೆಂಪಕಟ್ಟಯ್ಯನು ಸದರೀ ಮೈನರಿನ ಆಸ್ತಿ ಕಾಪಾಡುವದಕ್ಕೆ ಸರಟಿಫಿಕೇಟ್ ಬಗ್ಯೆ ಅರ್ಜಿ ಕೊಟ್ಟು ಇರುತ್ತಾನೆ. ಸದರೀ ಅರ್ಜಿ ಹಿಯರಿಂಗ್ ಬಗ್ಯೆ 1896ನೇ ಇಸವಿ ಫಿಬ್ರವರಿ ತಿಂಗಳ 26ರಲ್ಲು ಪೊಕರರ್ ಮಾಡಿರುವದಾಗಿ ಇದರಿಂದ ನೋಟಿಸ್ ಕೊಡಲಾಗಿದೆ.

1896ನೇ ಇಸವಿ ಜನವರಿ ತಿಂಗಳ 23ನೇ ತಾರೀಖಿನಲ್ಲಿ ಕೋರ್ಟ್ ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸ್ಯ 1895—96ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 293.

ವೈತಪಟ್ಟ ಹಾಜಿ ಷೇಕ್‌ಅಹಮದ್‌ಸಾಹೆಬರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಬೆಂಗಳೂರು ದೊಡ್ಡಪ್ಯಾಟೆಯಲ್ಲಿ ಇರುವ ಮಹಮ್ಮದ್ ಅಬ್ದುಲ್ಲಾಸಾಬಿ ಮತ್ತು ಅಬ್ದುಲ್ ರಹೀಂಸಾಬಿಯು ವೈತಪಟ್ಟ ಸದರೀ ಹಾಜಿ ಷೇಕ್‌ಅಹಮ್ಮದ್‌ಸಾಬರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ದೊಡ್ಡಪೇಟೆ ಸ್ಥಳದ ಮಹಮ್ಮದ್ ಅಬ್ದುಲ್ಲಾಸಾಬಿ ಮತ್ತು ಅಬ್ದುಲ್ ರಹೀಂಸಾಬಿಯು ಡಿಟೋ ವಾಸಸ್ಥರಾಗಿ ವೈತಪಟ್ಟ ಹಾಜಿ ಷೇಕ್ ಅಹಮ್ಮದ್‌ಸಾಹೆಬರ ಜೀಂದಗಿ ಬಗ್ಗಾಗಿ ಬರತಕ್ಕ ಸೂಲವನ್ನು ವಸೂಲ್ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬ್ಯಗ್ಗೆ ಈ ಕೋರ್ಟ್‌ಗೆ ಟಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮಹಮ್ಮದ್ ಅಬ್ದುಲ್ಲಾಸಾಬಿ ಮತ್ತು ಅಬ್ದುಲ್‌ರಹೀಂಸಾಬಿಯ ಅರ್ಜಿಯನ್ನು ಸ್ಯ 1896ನೇ ಇಸವಿ ಮಾರ್ಚ್ ತಿಂಗಳ ತಾರೀಖು 11ರಲ್ಲು ಕೇಳಿ ಸರಟಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆಮಾಡಲ್ಪಡುತ್ತೆ. ಆಕಾಲದಲ್ಲಿ ಸದರೀ ವೈತಪಟ್ಟ ಹಾಜಿ ಷೇಕ್‌ಅಹಮ್ಮದ್‌ಸಾಬರ ಆಸ್ತಿಗೆ ಹಕ್ಕುದಾರರಾದ ವಿಶ್ವರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1896ನೇ ಇಸವಿ ಜನವರಿ ತಿಂಗಳ 31ನೇ ತಾರೀಖಿನಲ್ಲಿ ಕೋರ್ಟ್ ಮೊಹರ್ ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಕೋಲಾರ ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

ತಾರೀಖು 4ನೇ ಫಿಬ್ರವರಿ 1896.

1. ಕಾಯಂಗುತ್ತಾ ಬಾಕಿದಾರರಾದ ಅಂಗತಟ್ಟ್ ಗ್ರಾಮದ ಹನುಮಂತರಾಯುಂದ ಬರಬೇಕಾದ ಜರ್ಮಾನೆ ಕಂದಾಯದ ಬಾಕಿಗಾಗಿ ಪಿಡುವಳಿ ಹಕ್ಕು ತಪ್ಪಿ ಹೋಗಿದೆ ಯಂದು ಪ್ರಕಟಿಸಲ್ಪಟ್ಟಿರುವ ಇದರಡಿ ನಮೂದಾಗುವ ಸ್ಥಿರಸ್ವತ್ತು ಕೋಲಾರ ಡಿಸ್ಟ್ರಿಕ್ಟ್ ಶಿಡ್ಲಘಟ್ಟ ತಾಲ್ಲೂಕು ಕಛೇರಿಯಲ್ಲಿ 1896ನೇ ಇಸವಿ ಮಾರ್ಚಿ 18ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1894—95ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಪೀಲ್ ಮೇರಿಗೆ 1137—11—0 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ವಿಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲ್‌ಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಅತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮ್ಮಿಷನರವರಿಂದ ಮುಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನ ಪೂರ್ತಿಯಾಗಿ ಪಾವತಿಮಾಡಿದ ಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜು ಮುಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಕಾಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಆಂಥಾ ಅಪ್ಪೀಲಿನಲ್ಲಿ ಆಗುವ ಫೈನಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.